OS. NO 17/2017

PW.1

ದಿನಾಂಕಃ30.10.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯವಿಚಾರಣೆಃ- ವಾದಿಗಳ ಪರ ವಕೀಲರಾದ ಶ್ರೀ. ಕೆಸಿಜೆ ರವರಿಂದಃ

ನಾನು ಈ ದಾವೆಯಲ್ಲಿ 1 ನೇ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ಛಾಪಾ ಕಾಗದದ ಮೇಲೆ ನಾನು ಪ್ರಮಾಣೀಕರಿಸಿ ದೃಢೀಕರಿಸಿರುವ ನಮ್ಮ ಕುಟುಂಬದ ವಂಶವೃಕ್ಷದ ಪ್ರತಿಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಸರ್ವೆ ನಂ. 561/4 ಜಮೀನಿಗೆ ಸಂಬಂಧಿಸಿದಂತೆ 2016-2017 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಮ್ಯೂಟೇಶನ್ ಎಕ್ಸ್ ಟ್ರಾಕ್ಟ್ ಎಂ ಆರ್ ನಂ.ಹೆಚ್ 313/2015-2016 ರ ಪ್ರತಿಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ಒಂದು ಕೈಬರಹದ ಪಹಣಿ ಪತ್ರಿಕೆಯ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

OS. NO 17/2017

PW.1

ಒಂದು ನೊಂದಾಯಿತ ಕ್ರಯಪತ್ರದ ಮೂಲಪ್ರತಿಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಮ್ಯೂಟೇಶನ್ ಎಕ್ಸ್ ಟ್ರಾಕ್ಟ್ ಎಂ ಆರ್ ನಂ.57/2001-02 ರ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯವಿಚಾರಣೆಗೆ ಸಮಯ ಕೋರಿದ್ದು ಆಲಿಸಿ ಮುಂದೂಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

(ರಾಧಾ ಎಸ್.)
ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,
ಕನಕಪುರ